# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಲ್.ಹೆಚ್. ಹನುಮಂತಪ್ಪ, ಕೃಷಿ ಅಧಿಕಾರಿ ಜ.ಅ.ಇ.
ಲಿಂಗಸೂಗೂರು, ರಾಯಚೂರು ಜಿಲ್ಲೆ ಇವರ ವಿರುದ್ಧದ
ಲೋಕಾಯುಕ್ತ ರೈಡ್ ಪ್ರಕರಣದ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಕೃತೋಇ 31ಕೃಪವಿ 20009
ದಿನಾಂಕ:9-6-2009

2) ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ
ಇವರ ಪತ್ರ ಸಂಖ್ಯೆ:ಲೋಕ್/ಐಎನ್‌ವಿ (ಜಿ)-14/ಸಿಆರ್5/2009
ರಾಯಚೂರು ದಿನಾಂಕ:26-7-2011.

-0-

ಪ್ರಸ್ತಾವನೆ:-

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಶ್ರೀ ಎಲ್.ಹೆಚ್. ಹನುಮಂತಪ್ಪ, ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಲಿಂಗಸೂಗೂರು ತಾಲ್ಲೂಕು ರಾಯಚೂರು ಜಿಲ್ಲೆ ಇವರು ತಮ್ಮ ಎಲ್ಲಾ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಆಸ್ತಿಯನ್ನು ಹೊಂದಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಅವರ ಆಸ್ತಿ-ಪಾಸ್ತಿಗಳ ಮೇಲೆ ಕರ್ನಾಟಕ ಲೋಕಾಯುಕ್ತದ ಅಧಿಕಾರಿಗಳು ದಾಳಿ ನಡೆಸಿದ್ದು, ಅವರು ನೀಡಿದ ವರದಿಯನ್ನು ಆಧರಿಸಿ, ಸದರಿಯವರನ್ನು ಅವರ ಮೇಲಿನ ಕ್ರಿಮಿನಲ್ ಮೊಕದ್ದಮೆಯನ್ನು ಬಾಕಿಯಿರಿಸಿ ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಶ್ರೀ ಎಲ್.ಹೆಚ್. ಹನುಮಂತಪ್ಪ, ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಲಿಂಗಸೂಗೂರು ರಾಯಚೂರು ಜಿಲ್ಲೆ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅಭಿಪ್ರಾಯವನ್ನು ಕೋರಿದ್ದು, ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:26-7-2011ರ ಪತ್ರದಲ್ಲಿ ಸದರಿಯವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ ಸೂಕ್ತವೆನಿಸುವ ಕ್ರಮ ತೆಗೆದುಕೊಳ್ಳಬಹುದೆಂದು ಅಭಿಪ್ರಾಯಪಟ್ಟಿರುತ್ತಾರೆ.

ಪ್ರಕರಣದಲ್ಲಿ ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಇವರ ಅಭಿಪ್ರಾಯವನ್ನು ಪರಿಶೀಲಿಸಿದ ಸರ್ಕಾರ ಶ್ರೀ ಎಲ್.ಹೆಚ್. ಹನುಮಂತಪ್ಪ, ಕೃಷಿ ಅಧಿಕಾರಿ, ಇವರನ್ನು ಅವರ ಮೇಲಿನ ಲೋಕಾಯುಕ್ತ ಪ್ರಕರಣವನ್ನು ಬಾಕಿಯಿರಿಸಿ ಅವರನ್ನು ಅಮಾನತ್ತಿನಿಂದ ತೆರವುಗೊಳಿಸಿ ಸೇವೆಯಲ್ಲಿ ಪುನರ್‌ಸ್ಥಾಪಿಸಲು ತೀರ್ಮಾನಿಸಿದೆ.

...2.

40

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಅದೇಶ ಸಂಖ್ಯೆ:ಕೃತೋಇ 31 ಕೃಪವಿ 2009**
**ಬೆಂಗಳೂರು, ದಿನಾಂಕ:17-10-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎಲ್.ಹೆಚ್. ಹನುಮಂತಪ್ಪ, ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಲಿಂಗಸೂಗೂರು ರಾಯಚೂರು ಜಿಲ್ಲೆ ಇವರನ್ನು ಅವರ ಮೇಲಿನ ಲೋಕಾಯುಕ್ತದ ಕ್ರಿಮಿನಲ್ ಮೊಕದ್ದಮೆಯನ್ನು ಬಾಕಿಯಿರಿಸಿ, ಈ ಕೂಡಲೇ ಜಾರಿಗೆ ಬರುವಂತೆ ಅಮಾನತ್ತಿನಿಂದ ತೆರವುಗೊಳಿಸ-ಲಾಗಿದೆ. ಹಾಗೂ ಸದರಿಯವರನ್ನು ರೈತ ಸಂಪರ್ಕ ಕೇಂದ್ರ ಹೂವಿನಹಿಪ್ಪರಗಿ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಬಸವನಬಾಗೇವಾಡಿ ತಾಲ್ಲೂಕು, ಬಿಜಾಪುರ ಜಿಲ್ಲೆ ಇಲ್ಲಿ ಖಾಲಿಯಿರುವ ಕೃಷಿ ಅಧಿಕಾರಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕಪತ್ರ ತಪಾಸಣೆ) ಕರ್ನಾಟಕ, ಬೆಂಗಳೂರು
2) ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
3) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು
4) ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ, ರಾಯಚೂರು.
6) ಜಂಟಿ ಕೃಷಿ ನಿರ್ದೇಶಕರು, ಬಿಜಾಪುರ
7) ಸಹಾಯಕ ಕೃಷಿ ನಿರ್ದೇಶಕರು, ಬಸವನಬಾಗೇವಾಡಿ ತಾಲ್ಲೂಕು, ಬಿಜಾಪುರ ಜಿಲ್ಲೆ
8) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
9) ಸಂಬಂಧಪಟ್ಟ ಅಧಿಕಾರಿಗೆ (ಕೃಷಿ ಆಯುಕ್ತರ ಮೂಲಕ)
10) ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ
11) ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ
12) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ
13) ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು